**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವಾನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದರು) ಇವರ ಪ್ರಸ್ತಾಪಿಸಿರುವ ಶೂನ್ಯವೇಳೆಗೆ ಉತ್ತರ.**

**ಪ್ರಶ್ನೆ** : - ಮಂಗಳೂರಿನ ಕೋಟಿಯಾಲಬೈಲ ಪ್ರದೇಶದಲ್ಲಿ ಜಿಲ್ಲಾ ಕೇಂದ್ರ ಕಾರಾಗೃಹಕ್ಕೆ ಕಳೆದ 5 ತಿಂಗಳ ಹಿಂದೆ ಅಳವಡಿಸಿರುವ ಜಾಮರ್ ನಿಂದ ನೆಟ್‌ವರ್ಕ್ ಸಮಸ್ಯೆ ಇನ್ನೂ ಪರಿಹಾರವಾಗಿಲ್ಲ. ನಗರದ ಮುಖ್ಯ ಭಾಗದಲ್ಲಿ ಜೈಲು ಇದ್ದು, ಸುತ್ತಮುತ್ತ ಹಲವಾರು ವಸತಿ ಸಮುಚ್ಛಯಗಳು ಶಿಕ್ಷಣ ಸಂಸ್ಥೆಗಳು, ವ್ಯಾಪಾರ ಕೇಂದ್ರಗಳಿವೆ. ಸುಮಾರು 1 ಕಿ.ಮೀ. ದೂರದಲ್ಲಿ ಜಿಲ್ಲಾ ನ್ಯಾಯಾಲಯವಿದೆ. ಕಾರಾಗೃಹದಿಂದ 2 ಕಿ.ಮೀ. ವ್ಯಾಪ್ತಿಯಲ್ಲಿ ವ್ಯಾಪಾರ ವಹಿವಾಟು ಆನ್‌ಲೈನ್ ಶಿಕ್ಷಣ, ಯು.ಪಿ.ಐ. ನಿಂದ ಹಣ ಪಾವತಿಗೆ ತೊಂದರೆ ಹಾಗೂ ಕೋರ್ಟ್ ಕಲಾಪಗಳಿಗೂ ತುಂಬಾ ತೊಂದರೆಯಾಗಿರುವ ಬಗ್ಗೆ ಉದಯವಾಣಿ ದಿನಪತ್ರಿಕೆಯಲ್ಲಿ ಪ್ರಕಟಗೊಂಡ ವರದಿ.

ಈ ಬಗ್ಗೆ ಗೃಹ ಸಚಿವರ ಗಮನಕ್ಕೆ ತಂದಾಗ ಅವರು ಜೈಲಿನ ಅಧಿಕಾರಿಗಳಿಗೆ ಕಾರಾಗೃಹಕ್ಕೆ ಮಾತ್ರ ಸೀಮಿತಗೊಳಿಸಲು ಸೂಚಿಸಿದ್ದರೂ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಆದ್ದರಿಂದ, ವಕೀಲರ ಸಂಘವು ರಾಜ್ಯದ ಉಚ್ಚ ನ್ಯಾಯಾಲಯದಲ್ಲಿ ದೂರು ದಾಖಲಿಸಿರುತ್ತಾರೆ.

ಮಂಗಳೂರಿನ ಜಿಲ್ಲಾ ಕಾರಾಗೃಹವನ್ನು ಬಂಟ್ವಾಳ ತಾಲ್ಲೂಕಿನ ಬಾಳೆ ಪುಣಿಗೆ ವರ್ಗಾಯಿಸಲು ಕಳೆದ 06 ವರ್ಷಗಳಿಂದ ಕಾಮಗಾರಿಗಳು ನಡೆಯುತ್ತಿದ್ದು, ಒಂದು ಸಾವಿರ ಖೈದಿಗಳನ್ನು ಇಡಬಹುದಾದ ಮತ್ತು ಆಡಳಿತ ಕಛೇರಿಯು ಅಡುಗೆ ಕೋಣೆಗಳು ಪೂರ್ಣಗೊಂಡಿದ್ದು, ಸದರಿ ಜೈಲಿನ ವರ್ಗಾವಣೆಗೆ ಬೇಕಾದ ಅವಶ್ಯಕವಾಗಿರುವ ಆವರಣ ಗೋಡೆ ಹಾಗೂ ರಸ್ತೆಯನ್ನು ಪೂರ್ಣಗೊಳಿಸದೆ ಜೈಲು ಅನಾಥವಾಗಿರುವ ವಿಷಯವನ್ನು ಗೃಹ ಸಚಿವರ ಗಮನಕ್ಕೆ ತರಲಾಗಿದೆ.

ಮಾನ್ಯ ಗೃಹ ಸಚಿವರು ಅಪೂರ್ಣಗೊಂಡಿರುವ ಸದರಿ ಕಾಮಗಾರಿಗಳನ್ನು ಪೂರ್ಣಗೊಸಲು ರೂ.70 ಕೋಟಿಗಳ ಅವಶ್ಯಕತೆ ಇದ್ದು, ಇದನ್ನು ಬಿಡುಗಡೆಗೊಳಿಸುವುದಾಗಿ ಆಶ್ವಾಸನೆ ನೀಡಿದ್ದರು. ಇದುವರೆಗೂ ಆಶ್ವಾಸನೆ ಈಡೇರಿರುವುದಿಲ್ಲ. ಪ್ರಸ್ತುತ ಇರುವ ಜೈಲಿನ ಖೈದಿಗಳ ಸಂಖ್ಯೆ ಎರಡು ಪಟ್ಟು ಹೆಚ್ಚಾಗಿದ್ದು, ಪ್ರತಿದಿನ ಗಲಾಟೆ ಹೊಡೆದಾಟ ನಡೆಯುತ್ತಿರುತ್ತದೆ. ಜೈಲಿನಲ್ಲಿನ ಖೈದಿಗಳ ಹೊಡೆದಾಟ ಈ ಸುದ್ದಿ ಪ್ರಮುಖವಾಗಿದೆ. ಆದುದರಿಂದ ಇದೊಂದು ಸಾರ್ವಜನಿಕ ಮಹತ್ವವುಳ್ಳ ವಿಷಯವಾಗಿರುವುದರಿಂದ ಸದನದ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

**ಉತ್ತರ:-** 2022-23ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಭಾಷಣದಲ್ಲಿ ಕಾರಾಗೃಹಗಳಲ್ಲಿ ಮೊಬೈಲ್ ಬಳಕೆ ತಡೆಯಲು ಹಾಗೂ ಇನ್ನಿತರೇ ನಿಷೇಧಿತ ವಸ್ತುಗಳ ತಪಾಸಣೆ ಮಾಡಿ ಪತ್ತೆ ಹಚ್ಚಲು ಅತ್ಯಾಧುನಿಕ ಮಾದರಿಯ ಉಪಕರಣಗಳು ಮತ್ತು ಮೊಬೈಲ್ ಜಾಮರ್‌ಗಳನ್ನು ಅಳವಡಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ. ಸದರಿ ಯೋಜನೆಯ ಅನುಷ್ಠಾನಕ್ಕೆ ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿರುತ್ತದೆ.

ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿನ 05 ಸಂಖ್ಯೆ ಮೊಬೈಲ್ ಜಾಮರ್‌ಗಳ ದುರಸ್ಥಿ ಮತ್ತು ಮೇಲ್ದರ್ಜೆಗೇರಿಸುವ ಕಾರ್ಯ ಪ್ರಗತಿಯಲ್ಲಿದ್ದು, ಜಾಮರ್ ಅಳವಡಿಕೆಯಿಂದ ಉಂಟಾಗುವ ಸಾಧಕ-ಬಾಧಕಗಳನ್ನು ಪರಿಶೀಲಿಸಲಾಗುತ್ತಿದ್ದು, ಪರಿಶೀಲನಾ ಹಂತದಲ್ಲಿ ನೆಟ್‌ವರ್ಕ್ ಕುರಿತಂತೆ ಉಂಟಾಗುವ ಸಮಸ್ಯೆಗಳನ್ನು ತಕ್ಷಣವೇ ಪರಿಹರಿಸಲು ಕ್ರಮವಹಿಸುವಂತೆ ಹಾಗೂ ಮೊಬೈಲ್ ಜಾಮರ್ ಅನ್ನು ದುರಸ್ಥಿ ಮತ್ತು ಮೇಲ್ದರ್ಜೆಗೇರಿಸುವ ಕಾರ್ಯ ಕೈಗೊಂಡಿರುವ M/s. Telecommunications Consultants India Limited ರವರಿಗೆ ಜಾಮರ್‌ಗಳ Frequency ಯನ್ನು Recalibration ಮಾಡುವಂತೆ ಸೂಚಿಸಲಾಗಿರುತ್ತದೆ.

ಮುಂದುವರೆದು, ಸದರಿ ಸಂಸ್ಥೆಗೆ, ಎಲ್ಲಾ 04 Service Providers (Airtel, BSNL, VI, JIO) ಗಳ ಅಧಿಕಾರಿಗಳು ಮತ್ತು Department of Telecommunications (DOT) ಅಧಿಕಾರಿಗಳೊಂದಿಗೆ ದಿ:04-03-2025 ಮತ್ತು 07-03-2025 ರಂದು ಸಭೆಯನ್ನು ನಡೆಸಿ ಕಾರಾಗೃಹಗಳಲ್ಲಿ ಯಾವುದೇ ಕಾರಣಕ್ಕೂ, ಮೊಬೈಲ್ ಸಿಗ್ನಲ್ ದೊರೆಯದಂತೆ, ಜಾಮರ್‌ಗಳು ಸಂಪೂರ್ಣ ಕಾರ್ಯಕ್ಷಮತೆ ಹೊಂದಿರಬೇಕು ಹಾಗೂ ಸಾರ್ವಜನಿಕರಿಗೆ ಜಾಮರ್‌ಗಳ ಪ್ರಭಾವದಿಂದ ತೊಂದರೆ ಉಂಟಾಗಬಾರದು ಎಂದು ಸಭೆಯಲ್ಲಿ ಸೂಚಿಸಲಾಗಿರುತ್ತದೆ.

ಮಾನ್ಯ ಗೃಹ ಸಚಿವರು, ಕರ್ನಾಟಕ ರಾಜ್ಯ ಸರ್ಕಾರ ರವರು ಮಂಗಳೂರು ಜಿಲ್ಲಾ ಕಾರಾಗೃಹಕ್ಕೆ ದಿನಾಂಕ:13-06-2025ರಂದು ಭೇಟಿ ನೀಡಿ, ಕಾರಾಗೃಹದಲ್ಲಿ ಅಳವಡಿಸಲಾಗಿರುವ ಜಾಮರ್‌ಗಳು ಕಾರ್ಯನಿರ್ವಹಿಸದೇ ಇರುವ ಕುರಿತಂತೆ, ತಕ್ಷಣ ಸಂಬಂಧಪಟ್ಟವರಿಂದ ಸರಿಪಡಿಸಲು ಅಗತ್ಯ ಕ್ರಮ ಕೈಗೊಂಡು, ಇನ್ನು ಮುಂದೆ ಸದರಿ ಉಪಕರಣಗಳನ್ನು ಸುಸ್ಥಿಯಲ್ಲಿಟ್ಟುಕೊಂಡು ಕಾರ್ಯ ನಿರ್ವಹಿಸುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಲು ಸೂಚಿಸಿರುತ್ತಾರೆ. ಅದರಂತೆ, ಕ್ರಮವಹಿಸಲು M/s. Telecommunications Consultants India Limited ರವರಿಗೆ ಸೂಚಿಸಲಾಗಿರುತ್ತದೆ.

ಮಂಗಳೂರಿನ ಬಂಟ್ವಾಳ ತಾಲ್ಲೂಕು ಚೇಳೂರು ಮತ್ತು ಕುರ್ನಾಡು ಗ್ರಾಮದಲ್ಲಿ ನೂತನ ಕೇಂದ್ರ ಕಾರಾಗೃಹ ನಿರ್ಮಾಣಕ್ಕೆ ಜಿಲ್ಲಾಡಳಿತವು 63 ಎಕರೆ 89 ಸೆಂಟ್ಸ್ ಜಮೀನನ್ನು ಮಂಜೂರು ಮಾಡಿರುತ್ತದೆ. 2018-19ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಭಾಷಣದ ಕಂಡಿಕೆ 435ರಲ್ಲಿ ಬಂಟ್ವಾಳ ನೂತನ ಕಾರಾಗೃಹವನ್ನು ನಿರ್ಮಾಣ ಮಾಡಲಾಗುವುದೆಂದು ಘೋಷಿಸಿದ್ದು, ಅದರಂತೆ, ಮಂಗಳೂರು ನೂತನ ಕೇಂದ್ರ ಕಾರಾಗೃಹದ ವಸತಿಯೇತರ ಕಟ್ಟಡ ಮತ್ತು ರಸ್ತೆಗಳ ನಿರ್ಮಾಣ ಯೋಜನೆಗೆ ನಿಗದಿಪಡಿಸಲಾಗಿದ್ದ ರೂ.8500.00 ಲಕ್ಷಗಳ ಅಂದಾಜು ವೆಚ್ಚಗಳನ್ನು ಪರಿಷ್ಕರಿಸಿ ರೂ.11000.00 ಲಕ್ಷಗಳನ್ನು ನಿಗಧಿಪಡಿಸಲಾಗಿರುತ್ತದೆ. ಸರ್ಕಾರದ ಆದೇಶ ದಿನಾಂಕ: 01-03-2019ರಲ್ಲಿ, ನೂತನ ಕೇಂದ್ರ ಕಾರಾಗೃಹ ನಿರ್ಮಾಣ ಕಾಮಗಾರಿಯ ರೂ.11000-00 ಲಕ್ಷಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಮಂಜೂರಾತಿ ನೀಡಿ ಅನುದಾನವನ್ನು ಬಿಡುಗಡೆಗೊಳಿಸಲಾಗಿರುತ್ತದೆ.

ಮುಂದುವರೆದು, ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಮಂಗಳೂರು ವಿಭಾಗರವರು ಮಂಗಳೂರು ನೂತನ ಕೇಂದ್ರ ಕಾರಾಗೃಹದ 2ನೇ ಹಂತದ ಕಾಮಗಾರಿಗೆ ರೂ.179.00 ಕೋಟಿಗಳ ಪರಿಷ್ಕೃತ ಅನುದಾನ ಪಟ್ಟಿಯನ್ನು ಕಾರಾಗೃಹ ಇಲಾಖೆಗೆ ಸಲ್ಲಿಸಿದ್ದು, ಕಾರಾಗೃಹ ಇಲಾಖೆಯಲ್ಲಿ ಸದರಿ ಕಾಮಗಾರಿಗೆ 2025-26ನೇ ಸಾಲಿನ ಕ್ರಿಯಾ ಯೋಜನೆಗಯಲ್ಲಿ ಮಂಜೂರಾತಿ ನೀಡಲು, ಪ್ರಸ್ತಾವನೆ ಸಲ್ಲಿಸಿದ್ದು, ಪ್ರಸ್ತುತ ಸದರಿ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಚಾಲ್ತಿಯಲ್ಲಿರುವ ಮಾರ್ಗಸೂಚಿಗಳನ್ವಯ ಪರಿಶೀಲನಾ ಹಂತದಲ್ಲಿರುತ್ತದೆ.

**ಸಂಖ್ಯೆ: ಹೆಚ್‌ಡಿ 236 ಪಿಆರ್‌ಎ 2025**

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು